**ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದಗಾಯತ್ರಿನಗರ ವಾರ್ಡ್-76ರಲ್ಲಿ**
**ದಿನಾಂಕ: 17-07-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ**

**ಸಭಾ ನಡವಳಿಗಳು.**

**ವಾರ್ಡ್ ಸಂಖ್ಯೆ-76 ಗಾಯತ್ರಿನಗರ** **ಸಮಯ ಮಧ್ಯಹ್ನ 3:00 ಘಂಟೆಗೆ**

ದಿನಾಂಕ:17-07-2021 ರಂದು ವಾರ್ಡ್ ಸಂಖ್ಯೆ:76 ರ ಜುಲೈ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ:76 ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಯಕೊಂಡು ಸಭೆ ನಡೆಸಲು ಕೋರಿದರು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು, ವಾರ್ಡ್-76 ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀಮತಿ ಶಾರದಾ ಬಾಯಿ, |
| 5 | ಡಾ।। ಅಂಜನಾ, ಆರೋಗ್ಯ ಅಧಿಕಾರಿ |
| 6 | ಶ್ರೀ ಆರ್.ಸಂತೋಷ್, ಕೆಲಸ ಪರಿವೀಕ್ಷಕರು |
| 7 | ಶ್ರೀ ಮಂಜುನಾಥ್, ವಾರ್ಡ್ ವೆಲ್‌ಫೇರ್‌ಕಮಿಟಿ ಸದಸ್ಯರು |
| 8 | ಶ್ರೀಮತಿ ಕೃಪಾ ಪ್ರಕಾಶ್, ವಾರ್ಡ್ ವೆಲ್‌ಫೇರ್‌ಕಮಿಟಿ ಸದಸ್ಯರು |
| 9 | ಶ್ರೀ ಸಂತೋಷ್, ವಾರ್ಡ್ ವೆಲ್‌ಫೇರ್‌ಕಮಿಟಿ ಸದಸ್ಯರು |
| 10 | ಶ್ರೀ ರಂಗನಾಥ್, ಬೆಸ್ಕಾಂ, ಜೆ.ಇ |
| 11 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂಎಸ್‌ಎಸ್‌ಬಿ |
| 12 | ಶ್ರೀ ಕೊಂಡಯ್ಯ, ಆರೋಗ್ಯ ಪರಿವೀಕ್ಷಕರು |
| 13 | ಶ್ರೀ ಈಶ್ವರ್‌ಗೌಡ, ವಾರ್ಡ್ ಅಧ್ಯಕ್ಷ |

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

**ಆರೋಗ್ಯ ಇಲಾಖೆ:**

- ವಾರ್ಡ್-76 ಗಾಯತ್ರಿನಗರ ವ್ಯಾಪ್ತಿಯಲ್ಲಿ ವ್ಯಾಕ್ಸಿನೇಷನ್ ನೀಡುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ಎಂದು ಸಭೆಯಲ್ಲಿ ತಿಳಿಸಿದರು ಹಾಗೂ ಕೋವಿಡ್-19 ನ ಪ್ರಕರಣಗಳು ದಿನಕ್ಕೆ 1 ಅಥವಾ 2 ಬರುತ್ತಿವೆ ಎಂದು ತಿಳಿಸಿದರು. ಕೋವಿಡ್-19ನ ವ್ಯಾಕ್ಸಿನೇಷನ್‌ನ್ನು ಬೀದಿಬದಿ ವ್ಯಾಪಾರಿಗಳು ಆಟೋಡ್ರೈವರ್‌ಗಳು ಮಾರುಕಟ್ಟೆಯಲ್ಲಿ ವ್ಯಾಪರ ಮಾಡುವಂತವರಿಗೆ ಆದ್ಯತೆ ಮೇರೆಗೆ ವ್ಯಾಕ್ಸಿನೇಷನ್ ನೀಡಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ಹಾಗೂ ಪರೀಕ್ಷೆ

ಬರೆಯಲು ಬರುವ ವಿದ್ಯಾರ್ಥಿಗಳಿಗೆ ತಾಪಮಾನ ಪರೀಕ್ಷಿಸುವಂತೆ ಉಷ್ಣಾಂಶ ಜಾಸ್ತಿ ಇರುವ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಪರೀಕೆ ಬರೆಯಲು ಅವಕಾಶ ಮಾಡಿಕೊಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

**ಆರೋಗ್ಯ ಇಲಾಖೆ (ಘನತ್ಯಾಜ್ಯ):**

- ಸಭೆಯಲ್ಲಿದ್ದ ಆರೋಗ್ಯ ಅಧಿಕಾರಿಗಳಿಗೆ ಕರ್ನ್ಸರ್ವೆನ್ಸಿಯಲ್ಲಿರುವ ಘನತ್ಯಾಜ್ಯವನ್ನು ತೆಗೆಯುವಂತೆ ಸಭೆಯಲ್ಲಿ ಸೂಚಿಸಲಾಯಿತು. ವಾರ್ಡ್-76 ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ನಿರ್ವಹಿಸಲು ಮೈಕ್ರೋಪ್ಲಾನ್ ಪ್ರಕಾರ ಪೌರಕಾರ್ಮಿಕರನ್ನು ನಿಯೋಜಿಸುವಂತೆ ನಿಯೋಜಿಸುವಂತೆ ಕಡತವನ್ನು ಹಿರಿಯ ಆರೋಗ್ಯ ಅಧಿಕಾರಿಗಳಿಗೆ ಸಲ್ಲಿಸಲಾಗಿದ್ದು, ಕಡತವನ್ನು ಅನುಮೋದನೆ ಮಾಡಿಸುವಂತೆ ಕ್ರಮಕೈಗೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು.

**ಕಂದಾಯ ಇಲಾಖೆ**

- ಕಂದಾಯ ಇಲಾಖೆಯ ಅಧಿಕಾರಿಗಳು ಏಪ್ರಿಲ್-2021 ರಿಂದ ಈವರೆವಿಗೂ 2 ಕೋಟಿಕಲೆಕ್ಷನ್ ಆಗಿದೆಯೆಂದು ತಿಳಿಸಿದರು ಹಾಗೂ ಹಿಂದಿನ ಆರಿಯರ್ಸ್ ಬಾಕಿ ಉಳಿಸಿಕೊಂಡವರಿಗೆ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದ್ದು ಅವರಿಂದ ಆರಿಯರ್ಸ್‌ನ್ನು ವಸೂಲಿ ಮಾಡಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಗಿದೆ.

**ಬೆಸ್ಕಾಂ ಇಲಾಖೆ**

- ಬೆಸ್ಕಾಂ ಇಲಾಖೆ ಅಧಿಕಾರಿಗಳು ತಮ್ಮಇಲಾಖೆಯಲ್ಲಿ ಯಾವುದೇ ದೂರು ಇರುವುದಿಲ್ಲವೆಂದು ಸಭೆಗೆತಿಳಿಸಿದರು.

**ಬಿಡಬ್ಲ್ಯೂಎಸ್ಎಸ್‌ಬಿ ಇಲಾಖೆ**

- ಬಿಡಬ್ಲ್ಯೂಎಸ್ಎಸ್‌ಬಿ ಇಲಾಖೆ ಅಧಿಕಾರಿಗಳು ತಮ್ಮಇಲಾಖೆಯಲ್ಲಿ ಯಾವುದೇ ದೂರು ಇರುವುದಿಲ್ಲವೆಂದು ಸಭೆಗೆತಿಳಿಸಿದರು.

**ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.**

**ಕಾರ್ಯದರ್ಶಿ,ಅಧ್ಯಕ್ಷರು**

**ಸಹಾಯಕ ಅಭಿಯಂತರರು, ವಾರ್ಡ್-76 ಗಾಯತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ**

**ನೋಡಲ್ ಅಧಿಕಾರಿಗಳು, ವಾರ್ಡ್-76 ಬಿಬಿಎಂಪಿ ಮಲ್ಲೇಶ್ವರಂ ಉಪ ವಿಭಾಗ,**